ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ ..... ಪುಟದ ಸಂಖ್ಯೆ ..... -1-

..... ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

ಮಂಡಿಸಿದೆ.

ವಿಷಯ:- Improvements to drains of Kariyanna Layout main road in Ward No.7 Byatarayanapura ಕಾಮಗಾರಿಯನ್ನು ತುರ್ತು ಕಾಮಗಾರಿಯೆಂದು ಪರಿಗಣಿಸಿ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಅನುಮೋದನೆ ನೀಡುವ ಕುರಿತು.

ಅಂದಾಜು ಮೊತ್ತ:- ರೂ. 75.00 ಲಕ್ಷಗಳು
ಜಾಬ್ ಕೋಡ್ ಸಂಖ್ಯೆ: 007-20-000002

1) ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಬಿಬಿಎಂಪಿ ಬ್ಯಾಟರಾಯನಪುರ ಉಪವಿಭಾಗದ ಬ್ಯಾಟರಾಯನಪುರ ವಾರ್ಡ್ ನಂ. 07ಕ್ಕೆ ಸಂಬಂಧಿಸಿದಂತೆ ಘನ ಸರ್ಕಾರವು ವಾರ್ಡ್ ಮಟ್ಟದಲ್ಲಿ 2018-19ನೇ ಸಾಲಿನ ಆಯವ್ಯದಲ್ಲಿ ಘೋಷಿಸಿರುವ ಒಟ್ಟು ರೂ. 2500.00 ಕೋಟಿಗಳ ಮೊತ್ತದಲ್ಲಿ ವಿವಿಧ ಅಭಿವೃದ್ದಿ ಕಾಮಗಾರಿಗಳ ಪೂರ್ವಭಾವಿ ಕೆಲಸ ಕಾರ್ಯಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಿದ್ದು, ಅದರಂತೆ, ರೂ. 2500.00 ಕೋಟಿಗಳ ಜೊತೆಯಲ್ಲಿ 5515.37 ಕೋಟಿಗಳ ಹೆಚ್ಚುವರಿ ಅನುದಾನ ಸೇರಿದಂತೆ ಒಟ್ಟು ರೂ. 8015.37 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳುವ ಕ್ರಿಯಾ ಯೋಜನೆಗೆ 16 ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಿದೆ.

2) ಮುಂದುವರೆದು, 2018-19ನೇ ಸಾಲಿನ "ಮುಖ್ಯ ಮಂತ್ರಿಗಳ ನವ ಬೆಂಗಳೂರು ಯೋಜನೆ" ಅಡಿಯಲ್ಲಿ ವಿವಿಧ ಕಾಮಗಾರಿಗಳನ್ನು ಲೆಕ್ಕಶೀರ್ಷಿಕೆ P3727 SC-SP/TSP Mukyamantrigala Nava Bengaluru Yojane ಯಡಿ ಕಲ್ಪಿಸಿದೆ. ಈ ಪೈಕಿ ಕಾಮಗಾರಿ ಜಾಬ್ ಸಂಕೇತ 007-20-000002 ರೂ. 75.00 ಗಳಿಗೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಯ ವಾರ್ಡ್ 07ರ ಪ್ರದೇಶವು ಹಿಂದಿನ ಬ್ಯಾಟರಾಯನಪುರ ನಗರಸಭೆಯಿಂದ ಪಾಲಿಕೆಗೆ ಹಸ್ತಾಂತರವಾದ ಪ್ರದೇಶಗಳಾಗಿದ್ದು, ಸದರಿ ವಾರ್ಡ್ ವ್ಯಾಪ್ತಿಯು ಹಿಂದಿನ ಬ್ಯಾಟರಾಯನಪುರ ನಗರಸಭೆಯಿಂದ ಪಾಲಿಕೆಗೆ ಹಸ್ತಾಂತರವಾದ ಬಡಾವಣೆಗಳು ಹಾಗೂ ಹಳ್ಳಿಗಳು ಸದರಿ ವಾರ್ಡ್ ವ್ಯಾಪ್ತಿಗೆ ಬರುತ್ತದೆ. ಸದರಿ ರಸ್ತೆಗಳು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕಾವೇರಿ ನೀರು ಸರಬರಾಜು ಮತ್ತು ಕೊಳವೆ ಸಾಲುಗಳನ್ನು ಅಳವಡಿಸಲು ಕೆಲಸವನ್ನು ನಿರ್ವಹಿಸಿಸುತ್ತಿರುತ್ತಾರೆ. ಈ ಪ್ರದೇಶಗಳ ರಸ್ತೆಗಳು ತುಂಬಾ ಹಾಳಾಗಿದ್ದು, ಹಾಗೂ ಹಿಂದಿನ ಬ್ಯಾಟರಾಯನಪುರ ನಗರಸಭೆ ವತಿಯಿಂದ ಪಾಲಿಕೆಗೆ ಹಸ್ತಾಮತರವಾದ ಬಡಾವಣೆಗಳಲ್ಲಿ ಸರಿಯಾದ ಮೂಲಭೂತ ಸೌಕರ್ಯಗಳಿಲ್ಲದೆ ರಸ್ತೆ ಮತ್ತು ಚರಂಡಿಗಳು ತುಂಬಾ ದುಸ್ಥಿತಿಯಲ್ಲಿರುತ್ತದೆ. ಆದುದರಿಂದ ರಸ್ತೆಗಳಲ್ಲಿ ದಿನನಿತ್ಯ ವಾಹನಗಳು ಹಾಗು ಶಾಲಾ ಮಕ್ಕಳ ಸುಗಮ ಸಂಚಾರಕ್ಕೆ ತೊಂದರೆಯುಂಟಾಗಿರುತ್ತದೆ.

3) ಸರ್ಕಾರದ ಆದೇಶದ ಸಂಖ್ಯೆಸರ್ಕಾರದ ಆದೇಶದ ಸಂಖ್ಯೆ:ನಅಇ 250 ಎಂಎನ್‌ವೈ 2019 ಬೆಂಗಳೂರು ದಿನಾಂಕ: 15.10.2019ರಂತೆ ಸದರಿ ಕಾಮಗಾರಿಯನ್ನು ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಆದೇಶ ನೀಡಲಾಗಿರುತ್ತದೆ.

4) ಸದರಿ ಕಾಮಗಾರಿಯ ಪ್ರದೇಶದಲ್ಲಿ ಶೇ.50 ಕಿಂತ ಹೆಚ್ಚಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಸಂಖ್ಯೆ ಇರುವ ಪ್ರದೇಶಗಳಾಗಿರುತ್ತದೆ. ಸರ್ಕಾರದ ಆದೇಶದಂತೆ SC-SP/TSP ಕಾಯ್ದೆಗೆ ಅನುಗುಣವಾಗಿ ಸಹಾಯಕ ಕಂದಾಯ ಅಧಿಕಾರಿ, ಕೊಡಿಗೇಹಳ್ಳಿ ಉಪವಿಭಾಗ ರವರು ದೃಢೀಕರಿಸಿರುತ್ತಾರೆ. (ಪ್ರತಿಯನ್ನು ಲಗತ್ತಿಸಿದೆ)

ಪು.ತಿ.ನೋ

ಸಂಖ್ಯೆ

5) ಆದುದರಿಂದ ಸದರಿ ಕಾಮಗಾರಿಗೆ 2018-19ನೇ ಸಾಲಿನ ಪಿಡಬ್ಲ್ಯೂಡಿ, ಬೆಂಗಳೂರು ವೃತ್ತ ದರಪಟ್ಟಿಯಂತೆ ಹಾಗೂ ಅನುಮೋದಿತವಾಗಿರುವ ಡೇಟಾ ದರಗಳಂತೆ ರೂ. 75.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ, ಈ ಅಂದಾಜು ಪಟ್ಟಿಗೆ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ನೀಡಲು ಹಾಗೂ ಈ ಮೇಲಿನ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಈ ಕಾಮಗಾರಿಯನ್ನು "ಅತಿ ತುರ್ತು ಕಾಮಗಾರಿಯೆಂದು ಪರಿಗಣಿಸಿ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಅನುಮೋದನೆ ನೀಡಲು ತಮ್ಮ ಮುಂದಿನ ಆದೇಶ ಕೋರಿ ಕಡತವನ್ನು ಮಂಡಿಸಿದೆ.

ಸಹಾಯಕ ಅಭಿಯಂತರರು
ವಾರ್ಡ್ ನಂ. 07

ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

6) ಕಾ.ಪಾ.ಅ, (ಬ್ಯಾ.ವಿ)

ಕಂಡಿಕೆ (1) ರಿಂದ (5) ರವರೆಗೆ ವಿವರಿಸಿರುವಂತೆ, ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ ರವರು ಸದರಿ ಕಾಮಗಾರಿಯನ್ನು ಕೈಗೊಳ್ಳುವ ಪ್ರದೇಶದಲ್ಲಿ ಶೇ. 50 ಕ್ಕಿಂತ ಹೆಚ್ಚಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರು ವಾಸುತ್ತಿರುವ ಬಗ್ಗೆ ಸಹಾಯಕ ಕಂದಾಯ ಅಧಿಕಾರಿರವರಿಂದ ದೃಢೀಕರಣ ಪಡೆದು (ಪ್ರತಿಯನ್ನು ಲಗತ್ತಿಸಿದೆ) ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಲು ಹಾಗೂ ಸರ್ಕಾರದ ಆದೇಶದ ಸರ್ಕಾರದ ಆದೇಶದ ಸಂಖ್ಯೆ:ನಅಇ 250 ಎಂಎನ್‌ವೈ 2019 ಬೆಂಗಳೂರು ದಿನಾಂಕ: 15.10.2019ರ ಆದೇಶದಂತೆ ಈ ಕಾಮಗಾರಿಯನ್ನು ಅತಿ ತುರ್ತು ಎಂದು ಪರಿಗಣಿಸಿ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಅನುಮೋದನೆ ನೀಡಲು ಮಾನ್ಯ ಆಯುಕ್ತರಿಗೆ ಕಡತವನ್ನು ಸಲ್ಲಿಸಲು ಮುಂದಿನ ಆದೇಶಕ್ಕಾಗಿ ಮಂಡಿಸಿದೆ.

23/10
ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ)

7) ಮುಖ್ಯ ಅಭಿಯಂತರರು (ಯ.ವ)

ಕಂಡಿಕೆ (01) ರಿಂದ (06) ರವರೆಗೆ ಅವಹಾನೆಗೆ ತರುತ್ತಾ, ಸದರಿ ವಾರ್ಡ್‌ನ ಪ್ರದೇಶದ ರಸ್ತೆಗಳು ಬಿಬಿಎಂಪಿಯ ಹೊಸ ಹೊರವಲಯಕ್ಕೆ ಸೇರ್ಪಡೆಗೊಂಡ ರಸ್ತೆಗಳಾಗಿರುತ್ತದೆ. ಸದರಿ ರಸ್ತೆಗಳು ತುಂಬಾ ಹದಗೆಟ್ಟಿದ್ದು, ಸಾರ್ವಜನಿಕರು ಸದರಿ ರಸ್ತೆಗಳನ್ನು ತುರ್ತಾಗಿ ಅಭಿವೃದ್ಧಿ ಪಡಿಸಲು ಬೇಡಿಕೆ ಇಟ್ಟಿರುತ್ತಾರೆ. ಈ ಕಾಮಗಾರಿಯ ಅವಶ್ಯಕತೆ ಹಾಗೂ ಸಾರ್ವಜನಿಕರ ಸೇವಾ ಹಿತದೃಷ್ಟಿಯಿಂದ ಈ ಕುರಿತು ಸರ್ಕಾರದ ಆದೇಶದ ಸಂಖ್ಯೆಸರ್ಕಾರದ ಆದೇಶದ ಸಂಖ್ಯೆ:ನಅಇ 250 ಎಂಎನ್‌ವೈ 2019 ಬೆಂಗಳೂರು ದಿನಾಂಕ: 15.10.2019ರಂತೆ ಆದೇಶದಲ್ಲಿ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಆಯುಕ್ತರ ಮಟ್ಟದಲ್ಲಿ ನೀಡಲಾಗಿರುತ್ತದೆ. ಈ ಎಲ್ಲಾ ಅಂಶಗಳು ಹಿನ್ನಲೆಯಲ್ಲಿ ಈ ಕಾಮಗಾರಿಯನ್ನು ತುರ್ತು ಕಾಮಗಾರಿಯೆಂದು ಪರಿಗಣಿಸಿ ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಹಾಗೂ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ಕಾಮಗಾರಿಯನ್ನು ನಿರ್ವಹಿಸಲು ಮಾನ್ಯ ಆಯುಕ್ತರ ಅನುಮೋದನೆ ಕೋರಿ ಕಡತವನ್ನು ಮಂಡಿಸಿದೆ.

Para 7/x for Kind perusal and approval.

23/10/19
ಮುಖ್ಯ ಅಭಿಯಂತರರು (ಯ.ವ)

ಕಂಡಿಕೆ 7ಕ್ಕೆ ಅನುಮೋದನೆ ಇದೆ

24/10/19
ವಿಶೇಷ ಆಯುಕ್ತರು (ಯೋಜನೆ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Hon. Comm. Sir

24/10/2019
Commissioner
Bruhat Bengaluru Mahanagara Palike

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ ..... Improvements to drain Kariyanna ~~Palya~~ Layout Main Road in ward no.7, Byatarayanpura ..... ಪುಟದ ಸಂಖ್ಯೆ .....

..... ಕಡತದ ಸಂಖ್ಯೆ ..... -3-

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು Job-code -007-20-000002
12	2019–20ನೇ ಸಾಲಿನ ಲೆಕ್ಕಶೀರ್ಷಿಕೆ **P3727 SC-SP/TSP Mukyamantrigala Nava Bengaluru Yojane** ಅಡಿಯಲ್ಲಿ ರೂ. 75.00 ಲಕ್ಷಗಳಿಗೆ ಅನುದಾನ ಮಂಜೂರಾಗಿದ್ದು, ಅದರಂತೆ ಸದರಿ Improvements to drains of Kariyanna Layout main road in Ward No.7 Byatarayanapura ರೂ 75.00 ಲಕ್ಷಗಳ ಕಾಮಗಾರಿಗೆ ಕಾಮಗಾರಿ ಸಂಕೇತ 007–20–000002 ರಂತೆ ದೊರೆತಿದ್ದು, ಕಂಡಿಕೆ (10)ರಲ್ಲಿ ಮಾನ್ಯ ಆಯುಕ್ತರವರು ಸದರಿ ಕಾಮಗಾರಿಯನ್ನು ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿರುವ ಮೇರೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಮೆಮೋ ಸಿದ್ದಪಡಿಸಿ ಸಹಿಗಾಗಿ ಮಂಡಿಸಿದೆ.
13	**ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ)** 24/10
14	ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ತಾಂತ್ರಿಕ ಮಂಜೂರಾತಿ ನೀಡಲು ಅನುಮೋದನೆ ಕೋರಿ ಕಡತವನ್ನು ಸಲ್ಲಿಸಿದೆ. 24/10 **ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ)**
15	**ಮುಖ್ಯ ಅಭಿಯಂತರರು (ಯ.ವ)** TA
16	ಸದರಿ ಕಾಮಗಾರಿಯ ಅಂದಾಜು ಪಟ್ಟಿಯ ಮೊತ್ತ ರೂ 75.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿ ಅನುಮೋದನೆ ನೀಡಲು ಮುಂದಿನ ಆದೇಶಕ್ಕೆ ಸಲ್ಲಿಸಿದೆ.
17	ಮುಖ್ಯ ಅಭಿಯಂತರರು (ಯ.ವ)
18	EE ಮುಖ್ಯ ಅಭಿಯಂತರರು ಯಲಹಂಕ ವಲಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
19	

ಪು.ತಿ.ನೋ

ಪುಟದ ಸಂಖ್ಯೆ .....

ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು
20	ಸದರಿ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ದೊರೆತಿರುವುದರಿಂದ DTS ತಯಾರಿಸಿ ಅನುಮೋದನೆಗಾಗಿ ಸಲ್ಲಿಸಿದೆ. 28/10 ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ) 28/10
21	ಮುಖ್ಯ ಅಭಿಯಂತರರು (ಯ.ವ)
22	ಕಾಮಗಾರಿಯ ಅಂದಾಜು ಮೊತ್ತ 75.00 ಲಕ್ಷಗಳಿಗೆ ಜಾಬ್ ನಂಬರ್ 007-20-000002 ದೊರೆಕಿದ್ದು, ಆಡಳಿತಾತ್ಮಕ ಅನುಮೋದನೆ, ತಾಂತ್ರಿಕ ಮಂಜೂರಾತಿ ಹಾಗೂ
23	ಡಿ.ಟಿ.ಎಸ್. ಪ್ರತಿಗೆ ಅನುಮೋದನೆ ದೊರೆತಿರುವುದರಿಂದ, ಅದರಂತೆ ಮೇ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಯು ಕರಾರು ಒಪ್ಪಂದ ಮಾಡಿಕೊಳ್ಳಲು ಪತ್ರ ಕಳುಹಿಸಲು Letter of Acceptance ಪತ್ರ ತಯಾರಿಸಿ ತಮ್ಮ ಸಹಿಗಾಗಿ ಮಂಡಿಸಿದೆ.
24	4/11 ನಕ್ಷೆಗಾರರು, 4/11 ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ವಿಭಾಗ
25	ಕೆ.ಆರ್.ಐ.ಡಿ.ಎಲ್ ಸಂಸ್ಥೆಯು ಕರಾರು ಒಪ್ಪಂದ ಪತ್ರಕ್ಕೆ ಸಹಿ ಹಾಕಿರುವುದರಿಂದ ತಮ್ಮ ಸಹಿಗಾಗಿ ಮಂಡಿಸಿದೆ.
26	8/11 ನಕ್ಷೆಗಾರರು, 8/11 ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ವಿಭಾಗ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ ..... ಪುಟದ ಸಂಖ್ಯೆ .....

..... ಕಡತದ ಸಂಖ್ಯೆ .....ಕ-

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು
22	ಕಂಡಿಕೆ (agreement) ರಲ್ಲಿ ಸದರಿ ಕಾಮಗಾರಿಯ ಕರಾರು ಒಪ್ಪಂದ ಪತ್ರಕ್ಕೆ ಸಹಿ ಹಾಕಿರುವುದರಿಂದ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಕೆಲಸದ ಆದೇಶ ಪತ್ರ ತಯಾರಿಸಿ ತಮ್ಮ ಸಹಿಗಾಗಿ ಮಂಡಿಸಿದೆ. ನಕ್ಷೆಗಾರರು,
24	ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ವಿಭಾಗ